# ದಿ ಗ್ರೈನ್ ಮರ್ಚೆಂಟ್ಸ್ ಕೋ.ಆಪರೇಟಿವ್ ಬ್ಯಾಂಕ್ ಲಿಮಿಟೆಡ್

THE GRAIN MERCHANTS CO-OPERATIVE BANK LTD.
Estd:1927

ಪ್ರಧಾನ ಕಛೇರಿಃ ನಂ.2, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 18
ದೂಃ 26677552, 26679041, E-mail: gmc@gmcbank.net, Websie: www.gmcbank.net

ದಿನಾಂಕ: **27.06.2024**

## ಪ್ರಕಟಣೆ

**ದಿ ಗ್ರೈನ್ ಮರ್ಚೆಂಟ್ಸ್ ಕೋ.ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಬೆಂಗಳೂರು–18, ಇಲ್ಲಿ ಖಾಲಿಯಿರುವ ಕೆಳಕಂಡ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗದಿತ ಅರ್ಜಿ ನಮೂನೆಗಳನ್ನು ಬ್ಯಾಂಕಿನ ಪ್ರಧಾನ ಕಛೇರಿಯಲ್ಲಿ ರಜಾ ದಿನಗಳನ್ನು ಹೊರತುಪಡಿಸಿ ದಿನಾಂಕ 01.07.2024 ರಿಂದ ಬ್ಯಾಂಕಿನ ವ್ಯವಹಾರದ ವೇಳೆಯಲ್ಲಿ ಪಡೆಯಬಹುದು. ಅರ್ಜಿ ಶುಲ್ಕ ರೂ. 1,000/- ಗಳನ್ನು ಬ್ಯಾಂಕಿನಲ್ಲಿ ನಗದು ಮೂಲಕ ಪಾವತಿಸಿ ನಿಗದಿತ ಅರ್ಜಿಯನ್ನು ಪಡೆಯಬಹುದು.**

| ಕ್ರ. ಸಂ | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ವೇತನ ಶ್ರೇಣಿ | ವಿದ್ಯಾರ್ಹತೆ |
|---|---|---|---|---|
| 1 | **ಮುಖ್ಯ ಕಾರ್ಯ ನಿರ್ವಹಣಾಧಿಕಾರಿ** | 01 | 74400-109600 | ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ, ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ್ಸ್ ಕೋರ್ಸ್ ಮಾಡಿರಲೇಬೇಕು. ಸಹಕಾರದಲ್ಲಿ ಪದವಿ ಪಡೆದಿದ್ದರೆ ಅಂಥ ವ್ಯಕ್ತಿಗಳಿಗೆ ಆದ್ಯತೆ. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕನ್ನಡವನ್ನು ಒಂದು ಭಾಷೆಯನ್ನಾಗಿ ಅಧ್ಯಯನ ಮಾಡಿರಲೇಬೇಕು.<br><br>MBA Finance / Banking ಪದವೀಧರರಿಗೆ ಹಾಗೂ ಕನಿಷ್ಠ 5 ವರ್ಷಗಳ ಬ್ಯಾಂಕಿಂಗ್ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ. |
| 2 | **ವ್ಯವಸ್ಥಾಪಕರು** | 02 | 52650-97100 | ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದಿರಬೇಕು. ಜೊತೆಗೆ ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ್ಸ್ ಜ್ಞಾನ ಹೊಂದಿರುವುದು ಕಡ್ಡಾಯ. ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆಗೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು<br><br>MBA, M.Com., ಪದವೀಧರರಿಗೆ ಹಾಗೂ 5 ವರ್ಷಗಳ ಬ್ಯಾಂಕಿಂಗ್ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ. |
| 3 | **ಲೆಕ್ಕಿಗರು** | 02 | 45300-88300 | ಅಂಗೀಕೃತ ವಿಶ್ವವಿದ್ಯಾನಿಲಯದಿಂದ ವಾಣಿಜ್ಯ ಪದವಿ ಪಡೆದಿರಬೇಕು. ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ್ಸ್ ಜ್ಞಾನದ ಜೊತೆಗೆ ಟ್ಯಾಲಿ ಕೋರ್ಸ್ ತೇರ್ಗಡೆ ಪತ್ರವನ್ನು ಹೊಂದಿರಬೇಕು. ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆಗೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು.<br><br>B.Com,/M.Com,/MBA Finance/Banking ಪದವೀಧರರಿಗೆ ಹಾಗೂ 5 ವರ್ಷಗಳ ಬ್ಯಾಂಕಿಂಗ್ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ. |
| 4 | **ಕಂಪ್ಯೂಟರ್ ಪ್ರೋಗ್ರಾಮರ್** | 01 | 40900-78200 | ಅಂಗೀಕೃತ ವಿಶ್ವವಿದ್ಯಾಲಯದ ಕಂಪ್ಯೂಟರ್ ಅಪ್ಲಿಕೇಷನ್ಸ್ ಪದವಿಯಲ್ಲಿ ಉತ್ತೀರ್ಣರಾಗಿರಬೇಕು.<br><br>ಅಂಗೀಕೃತ ವಿಶ್ವವಿದ್ಯಾಲಯದ ಕಂಪ್ಯೂಟರ್ ಸೈನ್ಸ್/ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ಸ್/ ಇನ್‌ಫರ್‌ಮೇಷನ್ ಸೈನ್ಸ್ ನಲ್ಲಿ ಬಿ.ಇ/ಬಿ.ಟೆಕ್ ಅಥವಾ ತತ್ಸಮಾನ ತಾಂತ್ರಿಕ ಪದವಿ ಪಡೆದಿರಬೇಕು. ಜೊತೆಗೆ ಕೋರ್ ಬ್ಯಾಂಕಿಂಗ್, ನೆಟ್‌ವರ್ಕಿಂಗ್, ಸೈಬರ್ ಸೆಕ್ಯೂರಿಟಿಯಲ್ಲಿ ಪಾಂಡಿತ್ಯ ಹೊಂದಿರಬೇಕು. ಕನ್ನಡ ಭಾಷೆಯಲ್ಲಿ ಓದು, ಬರಹ, ಮಾತನಾಡಬಲ್ಲವರಾಗಿರಬೇಕು. 2 ವರ್ಷಗಳ ಬ್ಯಾಂಕಿಂಗ್ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ. |
| 5 | **ಕಿರಿಯ ಸಹಾಯಕರು** | 03 | 33450-62600 | ದ್ವಿತೀಯ ಪಿ.ಯು.ಸಿ ಉತ್ತೀರ್ಣರಾಗಿರಬೇಕು. ಕಂಪ್ಯೂಟರ್ ಆಪರೇಷನ್ಸ್ & ಅಪ್ಲಿಕೇಷನ್ಸ್ ಜ್ಞಾನ ಹೊಂದಿರಬೇಕು. ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆಗೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು<br><br>ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ/ಸಹಕಾರ ವಿಷಯದಲ್ಲಿ ಪದವಿ ಹಾಗೂ ಬ್ಯಾಂಕಿಂಗ್ ಸೇವಾ ಅನುಭವ ಹೊಂದಿದವರಿಗೆ ಆದ್ಯತೆ. |

ಮೇಲಿನ ವೇತನ ಶ್ರೇಣಿಗಳ ಜೊತೆಗೆ ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ , ನಗರ ಪರಿಹಾರ ಭತ್ಯೆ ನೀಡಲಾಗುವುದು.

ವಯೋಮಿತಿಃ–

(1) ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಕನಿಷ್ಠ ವಯೋಮಿತಿ 18 ವರ್ಷ ತುಂಬಿರಬೇಕು. ಗರಿಷ್ಠ ಸಾಮಾನ್ಯ ವರ್ಗಗಳ ಅಭ್ಯರ್ಥಿ–35 ವರ್ಷ, ಹಿಂದುಳಿದ ವರ್ಗಗಳ ಅಭ್ಯರ್ಥಿ–38 ವರ್ಷ, ಪ.ಜಾತಿ, ಪ.ಪಂಗಳ ಮತ್ತು ಪ್ರವರ್ಗ 1ಎ ಅಭ್ಯರ್ಥಿ ಗರಿಷ್ಠ– 40 ವರ್ಷಗಳು ಮೀರಿರಬಾರದು. ಆ ವರ್ಗಕ್ಕೆ ಸೇರಿರುವರೆಂಬ ದೃಢೀಕರಣಕ್ಕಾಗಿ ಸಕ್ಷಮ ಪ್ರಾಧಿಕಾರ ನೀಡಿರುವ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು..
(2) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 26.07.2024.
(3) ಒಮ್ಮೆ ಪಾವತಿ ಮಾಡಿದ ಅರ್ಜಿ ಶುಲ್ಕವನ್ನು ಮರುಪಾವತಿಸಲಾಗುವುದಿಲ್ಲ.
(4) ವಯೋಮಿತಿಗೆ ಸಂಬಂಧಪಟ್ಟಂತೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
(5) ಭರ್ತಿ ಮಾಡಿದ ನಿಗದಿತ ಅರ್ಜಿಯ ಜೊತೆಯಲ್ಲಿ ಪತ್ರಾಂಕಿತ ಅಧಿಕಾರಿಯವರಿಂದ ದೃಢೀಕರಿಸಿದ ಎಸ್.ಎಸ್.ಎಲ್.ಸಿ/10ನೇ ತರಗತಿ, ದ್ವಿತೀಯ ಪಿ.ಯು.ಸಿ, ಪದವಿಯ ಎಲ್ಲಾ ವರ್ಷದ ಅಂಕಪಟ್ಟಿಯೊಂದಿಗೆ ಪದವಿ ಪ್ರಮಾಣ ಪತ್ರ ಸೇರಿದಂತೆ ಅಗತ್ಯವಿರುವ ಎಲ್ಲಾ ಪ್ರಮಾಣ ಪತ್ರಗಳನ್ನು ದ್ವಿ–ಪ್ರತಿಗಳಲ್ಲಿ ಸಲ್ಲಿಸುವುದು.
(6) ಸಂದರ್ಭಾನುಸಾರ ಲಕೋಟೆಯ ಮೇಲೆ "_____________" ಹುದ್ದೆಗೆ ಅರ್ಜಿ ಎಂದು ನಮೂದಿಸಿ ಸಲ್ಲಿಸತಕ್ಕದ್ದು.
(7) ಭರ್ತಿ ಮಾಡಿದ ಅರ್ಜಿಗಳನ್ನು ಬ್ಯಾಂಕಿನ ಪ್ರಧಾನ ಕಛೇರಿಗೆ ನೇರವಾಗಿ ಅಥವಾ ನೋಂದಾಯಿತ ಅಂಚೆ ಅಥವಾ ಕೋರಿಯರ್ ಮೂಲಕ ದಿನಾಂಕ 26.07.2024 ರಂದು ಸಂಜೆ 5.00 ರೊಳಗಾಗಿ ತಲುಪಿಸತಕ್ಕದ್ದು.
(8) ತಪ್ಪು ಮಾಹಿತಿ ಅಥವಾ ಅಪೂರ್ಣ ಮಾಹಿತಿ ನೀಡಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
(9) ಕಾನೂನು ಚೌಕಟ್ಟಿನಲ್ಲಿ ಅರ್ಜಿಗಳನ್ನು ತಿರಸ್ಕರಿಸುವ ಅಧಿಕಾರ ಬ್ಯಾಂಕಿಗೆ ದತ್ತವಾಗಿರುತ್ತದೆ.
(10) ಈ ನೇಮಕಾತಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.
(11) ನೇಮಕಾತಿ ಹಕ್ಕನ್ನು ಬ್ಯಾಂಕಿನ ಆಡಳಿತ ಮಂಡಳಿ ಕಾಯ್ದಿರಿಸಿದೆ.
(12) ನಿಗದಿತ ಕಾಲಾವಧಿ ನಂತರ ಸಲ್ಲಿಕೆಯಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
(13) ಷರತ್ತುಗಳು ಅನ್ವಯವಾಗುತ್ತದೆ.

ಆಯ್ಕೆ ವಿಧಾನಃ– ಆಯ್ಕೆ ವಿಧಾನವು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಮತ್ತು ನಿಯಮ 1960 ಹಾಗೂ ಸಹಕಾರ ಸಂಘಗಳ ನಿಬಂಧಕರು ಹೊರಡಿಸುವ ಸುತ್ತೋಲೆ/ನಿರ್ದೇಶನದ ಪ್ರಕಾರ ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಮೌಖಿತ ಸಂದರ್ಶನವನ್ನು ಒಳಗೊಂಡಿರುತ್ತದೆ.

ಸಹಿಃ–
**ಪ್ರಭಾರ ಕಾರ್ಯದರ್ಶಿ**
**ದಿ ಗ್ರೈನ್ ಮರ್ಚೆಂಟ್ಸ್ ಕೋ.ಆಪರೇಟಿವ್ ಬ್ಯಾಂಕ್ ಲಿಮಿಟೆಡ್,**